ಶ್ರೀ ವಸಂತ್ ವಿ ಸಾಲಿಯಾನ್ (ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು):

ಅ) ದಿನಾಂಕ: 31.3.2003ರ ಅಂತ್ಯಕ್ಕೆ ತಾತ್ಕಾಲಿಕ ಲೆಕ್ಕಪತ್ರಗಳ ಪ್ರಕಾರ ಈ ನಿಗಮವು ರೂ. 7.99 ಕೋಟಿಗಳ ಸಂಚಿತ ನಷ್ಟವನ್ನು ಅನುಭವಿಸಿರುತ್ತದೆ. 2002–2003ನೇ ಸಾಲಿನಲ್ಲಿ ಇದು ರೂ.91.06 ಲಕ್ಷಗಳ ನಷ್ಟವನ್ನು ಅನುಭವಿಸಿದೆ.

ಆ) ರಾಜ್ಯದ ಸಾರ್ವಜನಿಕ ಉದ್ದಿಮೆಗಳ ಪುನರ್ ರಚನಾ ಆಯೋಗವು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮವನ್ನು ಮುಚ್ಚುವಂತೆ ನೀಡಿರುವ ವರದಿಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇ) ಈ ಬಗ್ಗೆ ಅಂತಿಮ ನಿರ್ಧಾರವನ್ನು ಇನ್ನೂ ಕೈಗೊಳ್ಳಬೇಕಾಗಿದೆ.

ಮೀನುಗಾರಿಕಾ ಅಭಿವೃದ್ಧಿ ನಿಗಮದಲ್ಲಿ ಸ್ವಯಂ ನಿವೃತ್ತಿ ಯೋಜನೆ

3097 (3474) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) : ಮಾನ್ಯ ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದಲ್ಲಿ ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ನೌಕರರ ಸಂಖ್ಯೆ ಎಷ್ಟು;

ಆ) ಸೇವೆ ಸಲ್ಲಿಸುತ್ತಿರುವ ನೌಕರರಿಗೆ ಸ್ವಯಂ ನಿವೃತ್ತಿ ಯೋಜನೆಯನ್ನು ತರಲಾಗಿದೆಯೇ;

ಇ) ಹಾಗಿದ್ದರೆ, ಈ ನೌಕರರಿಗೆ ಸಿಗುವ ಪರಿಹಾರ ಎಷ್ಟು;

ಈ) ಸ್ವಯಂ ನಿವೃತ್ತಿ ಬಯಸದ ನೌಕರರನ್ನು ಬೇರೆ ಇಲಾಖೆಗಳಿಗೆ ನಿಯೋಜಿಸಲಾಗುವುದೇ?

ಶ್ರೀ ವಸಂತ್ ವಿ ಸಾಲಿಯಾನ್ (ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು):

ಅ) ಪ್ರಸ್ತುತ ನಿಗಮದಲ್ಲಿ ವ್ಯವಸ್ಥಾಪಕ ನಿರ್ದೇಶಕರನ್ನು ಒಳಗೊಂಡಂತೆ ಒಟ್ಟು 227 ನೌಕರರು ಸೇವೆಯನ್ನು ಸಲ್ಲಿಸುತ್ತಿದ್ದಾರೆ.

ಆ) ಇನ್ನೂ ಇಲ್ಲ.

ಇ) ಇನ್ನೂ ಅಂತಿಮಗೊಳಿಸಿಲ್ಲ

ಈ) ಇನ್ನೂ ಅಂತಿಮಗೊಳಿಸಿಲ್ಲ

ಕೊಪ್ಪಳ ಜಿಲ್ಲೆಯಲ್ಲಿರುವ ಭಾರಿ ಮತ್ತು ಮಧ್ಯಮ ಕೈಗಾರಿಕ ಘಟಕಗಳಲ್ಲಿ ನೇಮಕಾತಿ ಮಾಡುವುದು

3098 (3462) : ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಪ್ಪಳ ಜಿಲ್ಲೆಯಲ್ಲಿರುವ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು ಎಷ್ಟು?

ಆ) ಈ ಕೈಗಾರಿಕೆಗಳಲ್ಲಿ ಸರೋಜಿನಿ ಮಹಿಷಿ ವರದಿಯ ಪ್ರಕಾರ ನೇಮಕಾತಿ ಮಾಡಲಾಗಿದೆಯೆ; ಮಾಡದೆ ಇದ್ದ ಕೈಗಾರಿಕೆಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು;

ಇ) ಈ ಕೈಗಾರಿಕೆಗಳು ಉತ್ಪಾದಿಸುವ ಉತ್ಪನ್ನಗಳ ವಿವರ; ಇವುಗಳಿಗೆ ಸರ್ಕಾರದ ಸಹಾಯಧನವನ್ನು ಪೂರ್ಣ ವಿವರ ನೀಡುವುದು;

ಈ) ಕೈಗಾರಿಕೆಗಳು ಪರಿಸರ ಮಾಲಿನ್ಯವನ್ನು ಕಾಪಾಡಿಕೊಂಡಿವೆಯೇ ಕಾಪಾಡಿಕೊಂಡಿರುವ ಕೈಗಾರಿಕೆಗಳ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೆ?

ಶ್ರೀ ಆರ್.ವಿ. ದೇಶ್‌ಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) ಕೊಪ್ಪಳ ಜಿಲ್ಲೆಯಲ್ಲಿ 11 ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು ಇರುತ್ತವೆ.

ಆ) ಕೈಗಾರಿಕಾ ಘಟಕಗಳು ಸರೋಜಿನಿ ಮಹಿಷಿ ವರದಿ ಪ್ರಕಾರ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸಬೇಕಾಗಿರುತ್ತದೆ, ಸ್ಥಳೀಯ ಕನ್ನಡಿಗರಿಗೆ ಉದ್ಯೋಗವನ್ನು ನೀಡಿರುವ ಬಗ್ಗೆ ಕಾಲಕಾಲಕ್ಕೆ ಪರಿಶೀಲನೆ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡಿರುವುದು ಕಡಿಮೆ ಇದ್ದಲ್ಲಿ ಘಟಕದವರ ಜೊತೆ ಮಾತುಕತೆ ನಡೆಸಿ ಸ್ಥಳೀಯರಿಗೆ ಉದ್ಯೋಗ ನೀಡುವುದನ್ನು ಉತ್ತಮಗೊಳಿಸಲು ತಿಳಿಸಿ ಪರಿಶೀಲಿಸಲಾಗುವುದು.

ಇ) ಇದರಲ್ಲಿ ಹೆಚ್ಚಿನ ಕೈಗಾರಿಕೆಗಳು ಉಕ್ಕು ಮತ್ತು ಬೀಗು ಕಬ್ಬಿಣ ಉತ್ಪನ್ನ ಮಾಡುತ್ತಿರುತ್ತವೆ. ಭಾರೀ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಸಹಾಯ ಧನ ನೀಡುವ ಯೋಜನೆ ಇರುವುದಿಲ್ಲ.

ಈ) ಎಲ್ಲಾ ಕೈಗಾರಿಕಾ ಘಟಕಗಳು ಸ್ಥಾಪನೆಗಾಗಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ನೀರು ಮತ್ತು ಗಾಳಿ ಮಾಲಿನ್ಯದ ಬಗ್ಗೆ ಪರವಾನಗಿ ಪಡೆಯಬೇಕಾಗಿರುತ್ತದೆ. ಕೆಲವೊಂದು ನಿರ್ದಿಷ್ಟ ಕೈಗಾರಿಕಾ ಘಟಕಗಳು ಪರಿಸರ ಮಾಲಿನ್ಯ ಪರವಾನಿಗೆ: ಮಂಜೂರಾತಿಯನ್ನು ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಸಮಿತಿ / ಕೇಂದ್ರ ಸರ್ಕಾರದ ಪರಿಸರ ಮಾಲಿನ್ಯ ಮಂತ್ರಾಲಯದಿಂದ ಚಟುವಟಿಕೆ ಹಾಗೂ ಬಂಡವಾಳ ಆಧಾರದ ಮೇಲೆ ಪಡೆಯಬೇಕಾಗಿರುತ್ತದೆ.

ರಾಜ್ಯದ ವಸತಿ ನಿಲಯಗಳಲ್ಲಿ ಸ್ಥಳೀಯ ಅಭ್ಯರ್ಥಿಗಳಿಗೆ ನೇಮಕಾತಿಯಲ್ಲಿ ಆಗಿರುವ ಅನ್ಯಾಯದ ಬಗ್ಗೆ

3099 (3463) : ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವಸತಿ ನಿಲಯಗಳಲ್ಲಿ ಅಡಿಗೆ ಸಹಾಯಕರು, ಕಾವಲುಗಾರರನ್ನು ನೇಮಕಾತಿ ಮಾಡಿದ್ದು, ಸ್ಥಳೀಯ ಜಿಲ್ಲೆಯವರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಕೈಗೊಂಡ ಕ್ರಮವೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ನೇಮಕಾತಿ ಸೀಮಿತಗೊಳಿಸಲು ನಿಯಮ ಇರುವುದಿಲ್ಲ.

ಆ) ಅನ್ವಯವಾಗುವುದಿಲ್ಲ.

ಸವದತ್ತಿ ತಾಲ್ಲೂಕಿನ ಶ್ರೀ ಕ್ಷೇತ್ರ ಸೂಗಲದಲ್ಲಿ ಮತ್ಸ್ಯಾಲಯವನ್ನು ಪೂರ್ಣಗೊಳಿಸುವುದು

3100 (3432) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಶ್ರೀಕ್ಷೇತ್ರ ಸೂಗಲದಲ್ಲಿ ಅರ್ಧಕ್ಕೆ ನಿಂತಿರುವ ಮತ್ಸ್ಯಾಲಯ ಕಟ್ಟಡವನ್ನು ಹಾಗೂ ಮತ್ಸ್ಯಾಲಯಕ್ಕೆ ಅವಶ್ಯವಿರುವ ಎಲ್ಲಾ ಸೌಕರ್ಯಗಳನ್ನು ಪೂರೈಸಲು ಕ್ರಮ ಕೈಗೊಳ್ಳಲಾಗುವುದೇ:

ಆ) ಯಾವಾಗ ಈ ಕೆಲಸವನ್ನು ಪೂರ್ಣ ಮುಗಿಸಲಾಗುವುದು: